| ಕರ್ನಾಟಕ ವಿಧಾನ ಪರಿಷತ್ತು | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 503 (534) |
| ಸದಸ್ಯರ ಹೆಸರು | : | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 20.08.2026 |
| ಉತ್ತರಿಸುವವರು | : | ಮುಖ್ಯಮಂತ್ರಿಯವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ವಿವಿಧ ಸರ್ಕಾರಿ ಇಲಾಖೆಗಳಲ್ಲಿ ಖಾಲಿ ಇರುವ ಅನುಮೋದಿತ ಹುದ್ದೆಗಳೆಷ್ಟು; ಎಷ್ಟು ಹುದ್ದೆಗಳ ಭರ್ತಿಗೆ ಅಧಿಸೂಚನೆ ಹೊರಡಿಸಲು ಉದ್ದೇಶಿಸಲಾಗಿದೆ; ಅವುಗಳಲ್ಲಿ ಕೆ.ಪಿ.ಎಸ್.ಸಿ. ಹಾಗೂ ಇತರ ನೇಮಕಾತಿ ಪ್ರಾಧಿಕಾರಗಳ ಮೂಲಕ ಭರ್ತಿ ಮಾಡಲು ಬಾಕಿ ಇರುವ ಹುದ್ದೆಗಳೆಷ್ಟು; (ಇಲಾಖಾವಾರು ಮಾಹಿತಿ ನೀಡುವುದು) | ರಾಜ್ಯದಲ್ಲಿ ವಿವಿಧ ಇಲಾಖೆಗಳಲ್ಲಿ ಒಟ್ಟು **2,95,710** ಹುದ್ದೆಗಳು ಖಾಲಿ ಇರುತ್ತವೆ. ವಿವರಗಳನ್ನು **ಅನುಬಂಧ-1 ರಲ್ಲಿ** ಒದಗಿಸಿದೆ.<br><br>ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ವಿವಿಧ ವೃಂದದ 72,186 ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಆದೇಶ ಸಂಖ್ಯೆ: CS/21/GEN/2026 ದಿನಾಂಕ:24.06.2026 ರಂತೆ ನೇರ ನೇಮಕಾತಿ ಹುದ್ದೆಗಳಿಗೆ ನೇಮಕಾತಿ ಅಧಿಸೂಚನೆ ಹೊರಡಿಸಿ, ನೇಮಕಾತಿ ಪ್ರಕ್ರಿಯೆಗಳನ್ನು ತುರ್ತಾಗಿ ಪೂರ್ಣಗೊಳಿಸಿ ಸೂಚಿಸಲಾಗಿದೆ<br><br>ಈಗಾಗಲೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ 2026 ನೇ ಸಾಲಿನಲ್ಲಿ ವಿವಿಧ ಇಲಾಖೆಗಳಲ್ಲಿ ಖಾಲಿಯಿರುವ ವಿವಿಧ ವೃಂದದ ಒಟ್ಟು **10652** ಹುದ್ದೆಗಳಿಗೆ ಈಗಾಗಲೇ ನೇಮಕಾತಿ ಅಧಿಸೂಚನೆಯನ್ನು ಹೊರಡಿಸಲಾಗಿದೆ. ವಿವರಗಳನ್ನು **ಅನುಬಂಧ-2** ರಲ್ಲಿ ಒದಗಿಸಿದೆ.<br><br>ಕರ್ನಾಟಕ ಲೋಕಸೇವಾ ಆಯೋಗದಿಂದ **319** ಹುದ್ದೆಗಳಿಗೆ ಅಧಿಸೂಚನೆ ಹೊರಡಿಸಲಾಗಿದೆ. ವಿವರಗಳನ್ನು **ಅನುಬಂಧ-3** ರಲ್ಲಿ ಒದಗಿಸಿದೆ. |
| ಆ) | ಕೆ.ಪಿ.ಎಸ್.ಸಿ. ಪರೀಕ್ಷೆಗಳು ಮುಗಿದರೂ ಫಲಿತಾಂಶ ಪ್ರಕಟಿಸಲು ಮತ್ತು ನೇಮಕಾತಿ ಆದೇಶ ನೀಡಲು ವರ್ಷಗಟ್ಟಲೆ ವಿಳಂಬವಾಗುತ್ತಿರುವುದಕ್ಕೆ ನಿಖರ ಕಾರಣಗಳೇನು: | ಕರ್ನಾಟಕ ಲೋಕಸೇವಾ ಆಯೋಗ (KPSC) ಮೂಲಕ ನಡೆಯುತ್ತಿರುವ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳ ಫಲಿತಾಂಶ ಪ್ರಕಟಿಸಲು ಮತ್ತು ನೇಮಕಾತಿ ಆದೇಶ ನೀಡಲು ವಿಳಂಬವಾಗುತ್ತಿರುವುದಕ್ಕೆ ಪ್ರಮುಖ ಕಾರಣಗಳು ಈ ಕೆಳಗಿನಂತಿವೆ:-<br><br>• ಮೂಲ ದಾಖಲೆಗಳ ಪರಿಶೀಲನೆ ವೇಳೆ ಅಂಧ/ದೃಷ್ಟಿಮಾಂದ್ಯ ಅಭ್ಯರ್ಥಿಗಳನ್ನು ವೈದ್ಯಕೀಯ ತಪಾಸಣೆಗೆ ಒಳಪಡಿಸಿ ವರದಿ ಪಡೆಯಲು ಹೆಚ್ಚಿನ ಸಮಯಾವಕಾಶ ತಗಲುವುದು.<br>• ಕೆಲವು ಹುದ್ದೆಗಳ ನೇಮಕಾತಿಯಲ್ಲಿ ದೈಹಿಕ ಸಾಮರ್ಥ್ಯ ಪರೀಕ್ಷೆಗಳನ್ನು ಪ್ರತ್ಯೇಕವಾಗಿ ನಡೆಸಿ, ಅರ್ಹತಾ ಪಟ್ಟಿ ಸಿದ್ಧಪಡಿಸಬೇಕಾಗಿರುವುದು.<br>• ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ ಹಾಗೂ ವಿವರಣಾತ್ಮಕ ಮಾದರಿಯ (Descriptive Type) ಉತ್ತರ ಪತ್ರಿಕೆಗಳನ್ನು ಮೌಲ್ಯಮಾಪಕರಿಂದ ಮೌಲ್ಯಮಾಪನ ಮಾಡಿಸುವ ಪ್ರಕ್ರಿಯೆಯು ಹೆಚ್ಚಿನ ಸಮಯ ತೆಗೆದುಕೊಳ್ಳುವುದು.<br>• ನೇಮಕಾತಿ ಪ್ರಕ್ರಿಯೆಗಳಿಗೆ ಸಂಬಂಧಿಸಿದಂತೆ ನ್ಯಾಯಾಲಯಗಳಲ್ಲಿ ಸಲ್ಲಿಕೆಯಾಗುವ ವಿವಿಧ ಪ್ರಕರಣಗಳು ಹಾಗೂ ತಡೆಯಾಜ್ಞೆಗಳು . |

| | | |
|---|---|---|
| | ಅಧಿಸೂಚನೆ ಹೊರಡಿಸಿದ ದಿನದಿಂದ ನೇಮಕಾತಿ ಮುಗಿಯುವವರೆಗೆ ನಿರ್ದಿಷ್ಟ ಕಾಲಮಿತಿಯನ್ನು (Time Frame) ಸರ್ಕಾರ ನಿಗದಿಪಡಿಸಿದೆಯೇ ಇಲ್ಲದಿದ್ದಲ್ಲಿ, ಹೊಸ ನಿಯಮ ತರಲಾಗುವುದೇ; | ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳ ನೇಮಕಾತಿ ಪ್ರಕ್ರಿಯೆಗಳನ್ನು ನಿರ್ದಿಷ್ಟ ಕಾಲಮಿತಿಯೊಳಗೆ ಪೂರ್ಣಗೊಳಿಸಲು ಎಲ್ಲಾ ಇಲಾಖೆಗಳು ಪ್ರತಿ ವರ್ಷ ಹುದ್ದೆಗಳನ್ನು ಆಯ್ಕೆ ಪ್ರಾಧಿಕಾರಗಳಿಗೆ ಬಿಡುಗಡೆ ಮಾಡುವ ಕುರಿತು ಹಾಗೂ ನೇಮಕಾತಿ ಪ್ರಾಧಿಕಾರಗಳು ನೇಮಕಾತಿ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲು ಅನುವಾಗುವಂತೆ ಅನುಸರಿಸಬೇಕಾದ ವಾರ್ಷಿಕ ವೇಳಾಪಟ್ಟಿಯನ್ನು ದಿನಾಂಕ 17.01.2025 ರ ಸುತ್ತೋಲೆ ಸಂಖ್ಯೆ: ಸಿಆಸುಇ 191 ಎಸ್‌ಎಲ್‌ಪಿ 2024 (ಭಾಗ-1) ರಲ್ಲಿ ನಿಗದಿಪಡಿಸಿದೆ. |
| ಈ) | ಸರ್ಕಾರದ ವಿಳಂಬ ನೀತಿಯಿಂದಾಗಿ ಲಕ್ಷಾಂತರ ಅಭ್ಯರ್ಥಿಗಳಿಗೆ ವಯೋಮಿತಿ ಮುಗಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದಕ್ಕೆ ಪರಿಹಾರವಾಗಿ ಅಭ್ಯರ್ಥಿಗಳಿಗೆ ವಯೋಮಿತಿ ಸಡಿಲಿಕೆ ನೀಡಲಾಗುವುದೇ; | ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 262 ಸೇನೆನಿ 2025 ದಿನಾಂಕ: 29.01.2026 ರಲ್ಲಿ ಈ ಆದೇಶ ಹೊರಡಿಸಿದ ದಿನಾಂಕದ ನಂತರ ಮುಂದಿನ ದಿನಾಂಕ: 31.12.2027 ರವರೆಗೆ ನೇರನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಿ ಹೊರಡಿಸುವ ಅಧಿಸೂಚನೆಗಳನ್ವಯ ಆಯ್ಕೆ ಪ್ರಕ್ರಿಯಯಲ್ಲಿ ಭಾಗವಹಿಸುವ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಆಯಾ ನೇಮಕಾತಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯಲ್ಲಿ ಒಂದು ಬಾರಿಯ ಕ್ರಮವಾಗಿ 5 ವರ್ಷಗಳ ಸಡಿಲಿಕೆ ನೀಡಿ ಆದೇಶಿಸಲಾಗಿದೆ **(ಅನುಬಂಧ-4)**. |
| ಉ) | ಫಲಿತಾಂಶ ಪ್ರಕಟಣೆಯಲ್ಲಿ ಪಾರದರ್ಶಕತೆ ತರಲು ಮತ್ತು ವಿಳಂಬ ತಪ್ಪಿಸಲು ಆಧುನಿಕ ತಂತ್ರಜ್ಞಾನ ಹಾಗೂ ಆನ್‌ಲೈನ್ ಮೌಲ್ಯಮಾಪನ ವ್ಯವಸ್ಥೆಯನ್ನು ಸಂಪೂರ್ಣವಾಗಿ ಜಾರಿಗೆ ತರಲಾಗಿದೆಯೇ? | ಈಗಾಗಲೇ ಕರ್ನಾಟಕ ಲೋಕಸೇವಾ ಆಯೋಗದಲ್ಲಿ ಆಧುನಿಕ ತಂತ್ರಜ್ಞಾನವನ್ನು ಬಳಸಿಕೊಂಡು OMR ಉತ್ತರ ಹಾಳೆಗಳ ಸ್ಕ್ಯಾನಿಂಗ್ ಕಾರ್ಯವನ್ನು ನಡೆಸಲಾಗುತ್ತಿದ್ದು, ವಿವರಣಾತ್ಮಕ ಉತ್ತರ ಪುಸ್ತಕಗಳನ್ನು ಸಹ ಡಿಜಿಟಲ್ ಮೌಲ್ಯಮಾಪನಕ್ಕೆ ಒಳಪಡಿಸಲಾಗುತ್ತಿದೆ. |

**ಕಡತ ಸಂಖ್ಯೆ: ಸಿಆಸುಇ 252 ರಾಸ 2026**

**(ಡಿ.ಕೆ. ಶಿವಕುಮಾರ್)**

ಮುಖ್ಯಮಂತ್ರಿ

## ಅನುಬಂಧ-1

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 503 (534) ಕ್ಕೆ ಮಾಹಿತಿ**

2026-27ನೇ ಸಾಲಿನ ವಿವಿಧ ಇಲಾಖೆಗಳಲ್ಲಿ ಖಾಲಿಯಿರುವ ಹುದ್ದೆಗಳ ಮಾಹಿತಿ

| ಕ್ರ.ಸಂ. | ಇಲಾಖೆಗಳು | ಖಾಲಿಯಿರುವ ಹುದ್ದೆಗಳು |
|---|---|---|
| 1. | ಕೃಷಿ | 6818 |
| 2. | ಪಶುಸಂಗೋಪನೆ | 11400 |
| 3. | ಹಿಂದುಳಿದ ವರ್ಗಗಳ ಕಲ್ಯಾಣ | 8764 |
| 4. | ಸಹಕಾರ | 4858 |
| 5. | ಸಿಬ್ಬಂದಿ ಮತ್ತು ಆಡಳಿತ ಸುಧಾರಣೆಗಳ ಇಲಾಖೆ | 6162 |
| 6. | ಇ - ಆಡಳಿತ | 73 |
| 7. | ಪರಿಸರ ಮತ್ತು ಜೀವಿಶಾಸ್ತ್ರ | 8 |
| 8. | ಇಂಧನ | 185 |
| 9. | ಆರ್ಥಿಕ | 7916 |
| 10. | ಮೀನುಗಾರಿಕೆ | 850 |
| 11. | ಆಹಾರ ಮತ್ತು ನಾಗರೀಕ ಸರಬರಾಜು | 1362 |
| 12. | ಅರಣ್ಯ | 6415 |
| 13. | ಕೈಮಗ್ಗ ಮತ್ತು ಜವಳಿ | 43 |
| 14. | ಆರೋಗ್ಯ | 38184 |
| 15. | ಉನ್ನತ ಶಿಕ್ಷಣ | 12996 |
| 16. | ಒಳಾಡಳಿತ | 27471 |
| 17. | ತೋಟಗಾರಿಕೆ | 3052 |
| 18. | ವಾರ್ತೆ | 353 |
| 19. | ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ | 62 |
| 20. | ಕನ್ನಡ ಮತ್ತು ಸಂಸ್ಕೃತಿ | 455 |
| 21. | ಕಾರ್ಮಿಕ | 3574 |
| 22. | ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ | 7930 |
| 23. | ಭಾರಿ ನೀರಾವರಿ | 651 |
| 24. | ಭಾರಿ ಮತ್ತು ಮಧ್ಯಮ ಕೈಗಾರಿಕೆ | 410 |
| 25. | ವೈದ್ಯಕೀಯ ಶಿಕ್ಷಣ | -19 |
| 26. | ಗಣಿ | 644 |
| 27. | ಸಣ್ಣ ನೀರಾವರಿ | 868 |
| 28. | ಅಲ್ಪಸಂಖ್ಯಾತರ ಕಲ್ಯಾಣ | 5376 |
| 29. | ಸಂಸದೀಯ ವ್ಯವಹಾರಗಳು | 381 |
| 30. | ಯೋಜನೆ, ಸಾಂಖ್ಯಿಕ , ವಿಜ್ಞಾನ ಮತ್ತು ತಂತ್ರಜ್ಞಾನ | 813 |
| 31. | ಲೋಕೋಪಯೋಗಿ | 1702 |
| 32. | ಕಂದಾಯ | 10309 |
| 33. | ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ | 10566 |
| 34. | ಪರಿಶಿಷ್ಟ ಜಾತಿಗಳ ಕಲ್ಯಾಣ | 10247 |
| 35. | ಪರಿಶಿಷ್ಟ ಪಂಗಡಗಳ ಕಲ್ಯಾಣ | 2445 |
| 36. | ಶಾಲಾ ಶಿಕ್ಷಣ ಮತ್ತು ಸಾಕ್ಷರತೆ | 88109 |
| 37. | ರೇಷ್ಮೆ | 3380 |
| 38. | ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ | 4064 |
| 39. | ಸಣ್ಣ ಕೈಗಾರಿಕೆ | 361 |
| 40. | ಪ್ರವಾಸೋದ್ಯಮ | 383 |
| 41. | ಸಾರಿಗೆ | 1550 |
| 42. | ನಗರಾಭಿವೃದ್ಧಿ | 859 |
| 43. | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ | 3473 |
| 44. | ಯುವಜನ ಸೇವೆಗಳು | 207 |
| | | **295710** |

## ಅನುಬಂಧ -2

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 503 (534) ಕ್ಕೆ ಮಾಹಿತಿ**

**ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಇವರಿಂದ ವಿವಿಧ ಇಲಾಖೆಗಳಲ್ಲಿನ ಖಾಲಿ ಹುದ್ದೆಗಳ ಭರ್ತಿಗಾಗಿ ಹೊರಡಿಸಲಾಗಿರುವ ಅಧಿಸೂಚನೆಗಳ ವಿವರ**

| Sl. No | Department | Post Name | No. of Post (RPC) | No. of Post (KK) | No. of Post (Total) | Notification Date | Exam date |
|---|---|---|---|---|---|---|---|
| 1 | Police Department | Police Constable (Civil) | 3395 | 596 | 3991 | 05.06.2026 | 02.08.2026 (RPC) & (KK) |
| | | Armed Police Constable (CAR/DAR) | 1421 | 179 | 1600 | 19.06.2026 | 06.09.2026 (RPC) / (KK) |
| 2 | Karnataka Residential Educational Institutions Society (KREIS) | Kannada Language Teachers | 103 | 62 | 165 | 10.07.2026 | 26.09.2026 & 27.09.2026 |
| | | English Language Teachers | 108 | 69 | 177 | | |
| | | Hindi Language Teachers | 55 | 31 | 86 | | |
| | | Mathematics Teachers | 103 | 35 | 138 | | |
| | | Science Teachers | 106 | 32 | 138 | | |
| | | Social Science Teachers | 154 | 24 | 178 | | |
| | | Computer Teachers | 57 | 0 | 57 | | |
| | | Physical Education Teachers | 81 | 33 | 114 | | |
| | | Graduate Drawing Teachers | 0 | 17 | 17 | | |
| | | Diploma Drawing Teachers | 0 | 17 | 17 | | |
| 3 | Police Department | Police Constable (KSISF) – Male | 0 | 364 | 364 | 10.07.2026 | 20.09.2026 (RPC) / (KK) |
| | | Police Constable (IRB) | 0 | 161 | 161 | | |

| | | | | | | | |
|---|---|---|---|---|---|---|---|
| | | Police Constable (KSRP) | 1455 | 334 | 1789 | | |
| 4 | Department of Survey Settlement and Land Records | Surveyor | 560 | 190 | 750 | 10.07.2026 | 03.10.2026 & 04.10.2026 (RPC) / 24.10.2026 & 25.10.2026 (KK) |
| 5 | Revenue Department | Village Administrative Officer (VAO) | 505 | 67 | 572 | 10.07.2026 | 04.10.2026 (RPC) & 25.10.2026 (KK) |
| 6 | Law Department | Section Officer | 18 | 2 | 20 | 20.07.2026 | |
| 7 | Horticulture Department | Assistant Director of Horticulture | 5 | 5 | 10 | 05.08.2026 | 26.09.2026 |
| | | Assistant Horticulture Officer | 75 | 0 | 75 | | 27.09.2026 |
| 8 | Employees State Insurance Scheme Medical Services Department | Nursing Officer | 90 | 11 | 101 | 06.08.2026 | 22.11.2026 |
| | | Pharmacy Officer | 98 | 11 | 109 | 06.08.2026 | 07.11.2026 |
| 9 | Karnataka Residential Educational Institutions Society (KREIS) | Staff Nurses | 0 | 23 | 23 | 06.08.2026 | 22.11.2026 |
| | | | 8389 | 2263 | 10652 | - | - |

## ಅನುಬಂಧ -3

### ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 503 (534) ಕ್ಕೆ ಮಾಹಿತಿ

### ಕೆ ಪಿ ಎಸ್ ಸಿ ಯಿಂದ ವಿವಿಧ ಇಲಾಖೆಗಳಲ್ಲಿನ ಖಾಲಿ ಹುದ್ದೆಗಳ ಭರ್ತಿಗಾಗಿ ಹೊರಡಿಸಲಾಗಿರುವ ಅಧಿಸೂಚನೆಯ ವಿವರ

**ಅಧಿಸೂಚನೆ ಸಂಖ್ಯೆ**: KPSCKA/EXA 1/EXMF/9/2026-EXAM-1/I/251710/2026
**ದಿನಾಂಕ**:31.07.2026

| ಉಳಿಕೆ ಮೂಲವೃಂದ | | ಹೈ.ಕ ವೃಂದ | | ಒಟ್ಟು ಹುದ್ದೆಗಳ ಸಂಖ್ಯೆ |
|---|---|---|---|---|
| ಗ್ರೂಪ್ "ಎ" | ಗ್ರೂಪ್ "ಬಿ" | ಗ್ರೂಪ್ "ಎ" | ಗ್ರೂಪ್ "ಬಿ" | |
| 112 | 185 | 05 | 17 | 319 |

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯ ಸಿವಿಲ್ ಸೇವಾ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿಗಳಲ್ಲಿ ಅಭ್ಯರ್ಥಿಗಳಿಗೆ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಒಂದು ಬಾರಿಯ ಕ್ರಮವಾಗಿ ಸಡಿಲಿಸುವ ಕುರಿತು.

**ಓದಲಾಗಿದೆ:** 1.ದಿನಾಂಕ 06.09.2025ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 249 ಸೇನೆನಿ 2025.

2.ದಿನಾಂಕ 29.09.2025ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 262 ಸೇನೆನಿ 2025.

*********

**ಪ್ರಸ್ತಾವನೆ:**

1. ಮೇಲೆ (2) ರಲ್ಲಿ ಓದಲಾದ ದಿನಾಂಕ:29.09.2025ರ ಆದೇಶದಲ್ಲಿ ದಿನಾಂಕ: 06.09.2025ರ ಆದೇಶವನ್ನು ಹಿಂಪಡೆದು, ದಿನಾಂಕ 31.12.2027 ರವರೆಗೆ ನೇರ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಿ ಹೊರಡಿಸುವ ಅಧಿಸೂಚನೆಗಳನ್ವಯ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಆಯಾಯ ನೇಮಕಾತಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯಲ್ಲಿ ಒಂದು ಬಾರಿಯ ಕ್ರಮವಾಗಿ (as a one-time measure) 3 ವರ್ಷಗಳ ಸಡಿಲಿಕೆ ನೀಡಿ ಆದೇಶಿಸಲಾಗಿದೆ.

2. ನಂತರದಲ್ಲಿ ಹಲವಾರು ಉದ್ಯೋಗಾಕಾಂಕ್ಷಿಗಳು, ಜನಪ್ರತಿನಿಧಿಗಳು ಮತ್ತು ಸಂಘ ಸಂಸ್ಥೆಗಳು ಮನವಿ ಸಲ್ಲಿಸಿ ರಾಜ್ಯ ಸಿವಿಲ್ ಸೇವೆಗಳಿಗೆ ಮಾಡುವ ನೇರ ನೇಮಕಾತಿಯಲ್ಲಿ ಗರಿಷ್ಠ ವಯೋಮಿತಿಯಲ್ಲಿ 5 ವರ್ಷಗಳ ಸಡಿಲಿಕೆಯನ್ನು ನೀಡುವಂತೆ ಕೋರಿರುತ್ತಾರೆ. ಸದರಿ ಮನವಿಗಳನ್ನು ಸರ್ಕಾರವು ಪರಿಶೀಲಿಸಿ ಒಂದು ಬಾರಿಗೆ ಮಾತ್ರ ವಯೋಮಿತಿಯಲ್ಲಿ 5 ವರ್ಷಗಳ ಸಡಿಲಿಕೆ ನೀಡಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 262 ಸೇನೆನಿ 2025**

**ಬೆಂಗಳೂರು, ದಿನಾಂಕ:29.01.2026**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಮೇಲೆ (2)ರಲ್ಲಿ ಓದಲಾದ ದಿನಾಂಕ: 29.09.2025ರ ಆದೇಶವನ್ನು ಹಿಂಪಡೆದು, ಈ ಆದೇಶ ಹೊರಡಿಸಿದ ದಿನಾಂಕದ ನಂತರ ಮುಂದಿನ ದಿನಾಂಕ 31.12.2027 ರವರೆಗೆ ನೇರ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಿ ಹೊರಡಿಸುವ ಅಧಿಸೂಚನೆಗಳನ್ವಯ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಆಯಾಯ ನೇಮಕಾತಿ ನಿಯಮಗಳಲ್ಲಿ

ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯಲ್ಲಿ ಒಂದು ಬಾರಿಯ ಕ್ರಮವಾಗಿ (as a one-time measure) 5 ವರ್ಷಗಳ ಸಡಿಲಿಕೆ ನೀಡಿ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ,

(ಆಶಾಕುಮಾರಿ ಎ ಜಿ) 22/01/2026
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ
(ಸೇವಾ ನಿಯಮಗಳು-1)

ಇವರಿಗೆ:
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ ಇದರ 50 ಪ್ರತಿಗಳನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಸೇವಾ ನಿಯಮಗಳು-ಎ), ಕೊಠಡಿ ಸಂಖ್ಯೆ-31 ವಿಧಾನಸೌಧ, ನೆಲಮಹಡಿ ಇಲ್ಲಿಗೆ ಕಳುಹಿಸುವಂತೆ ಕೋರಲಾಗಿದೆ.

**ಪ್ರತಿ**

1 ಪ್ರಧಾನ ಮಹಾಲೇಖಪಾಲರು, (ಜಿಎಸ್ಎಸ್ಎ)/(ಇ&ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2 ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ ಪಾರ್ಕ್ ಹೌಸ್ ರಸ್ತೆ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
4 ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಯವರು.
5 ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರು.
6 ಮಾನ್ಯ ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು.
7 ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
8 *ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ, ನವದೆಹಲಿ.
9 *ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಪರಿಷತ್ತು, ಬೆಂಗಳೂರು.
10 *ಮಹಾನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
11 *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
12 *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
13 *ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿ, 5 ಮತ್ತು 7ನೇ ಮಹಡಿ ಕಂದಾಯ ಭವನ, ಕೆ.ಜಿ. ರಸ್ತೆ, ಬೆಂಗಳೂರು-560009.
14 *ನಿಬಂಧಕರು, ಕರ್ನಾಟಕ [illegible], ಬೆಂಗಳೂರು.
15. ಎಲ್ಲಾ ಇಲಾಖಾ ಮುಖ್ಯಸ್ಥರು/ಎಲ್ಲಾ ಪ್ರಾದೇಶಿಕ ಆಯುಕ್ತರು.
16 ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್/ಎಲ್ಲಾ ಜಿಲ್ಲಾ, ಪೊಲೀಸ್ ವರಿಷ್ಠಾಧಿಕಾರಿಗಳು.
17. ಸರ್ಕಾರದ ಅವರ ಕಾರ್ಯದರ್ಶಿ (ಸಚಿವ ಸಂಪುಟ), (ಸಿ.47/2026, ದಿನಾಂಕ 22.01.2026).
18 ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು.
19 ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
20 ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

(*ಸೂಚನಾ ಪತ್ರದೊಂದಿಗೆ)